**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಸಿ.ಎನ್.ಮಂಜೇಗೌಡ ರವರು 330ನೇ ನಿಯಮದ ಮೇರೆಗೆ ನೀಡಿರುವ ಸಾರ್ವಜನಿಕ ಮಹತ್ವದ ಜರೂರಾದ ವಿಷಯಕ್ಕೆ ಉತ್ತರ**

**ಸೂಚನೆ:**

ಸಾಂಸ್ಕೃತಿಕ ರಾಜಧಾನಿ ಮೈಸೂರಿನಲ್ಲಿ ಅರಮನೆ ಸದೃಶವಾದ ನೂರಾರು ಕಟ್ಟಡಗಳಿವೆ. ಯದುವಂಶದ ಒಡೆಯರ್ ರಾಜಮನೆತನದ ಆಳ್ವಿಕೆಯ ಈ ನಗರಿಯಲ್ಲಿ ಸ್ಮಾರಕಗಳು, ರಸ್ತೆ, ಮಾರುಕಟ್ಟೆ, ಸಂತೆ, ಮನೆ-ಮಹಲು, ಮೊಹಲ್ಲಾಗಳಿಗೂ ಪಾರಂಪರಿಕ ಸೊಬಗಿದೆ. ಇಂಥದ್ದೊಂದು ವಿಶಿಷ್ಟ ವಿನ್ಯಾಸ ಹೊಂದಿರುವ ದೇಶದ ಅಪರೂಪದ ನಗರಿ ಮೈಸೂರು. ಇತ್ತೀಚಿನ ವರ್ಷಗಳಲ್ಲಿ ಮೈಸೂರಿನಲ್ಲಿ ಪಾರಂಪರಿಕ ಕಟ್ಟಡಗಳು ಕುಸಿದು ಬೀಳುತ್ತಲೇ ಇದ್ದರೂ ಸಹ ಯಾವ ಸರ್ಕಾರವಾಗಲಿ ಅದನ್ನು ಗಂಭೀರವಾಗಿ ಪರಿಗಣಿಸಿದಂತೆ ಕಾಣುತ್ತಿಲ್ಲ. ಈ ಬಗ್ಗೆ ವಿಜಯ ಕರ್ನಾಟಕ ಪತ್ರಿಕೆ ದಿನಾಂಕ:25-10-2022ರಲ್ಲಿ ಸವಿಸ್ತಾರವಾಗಿ ವರದಿಯಾಗಿದೆ. ಕಳೆದ 2 ತಿಂಗಳಿಂದೀಚೆಗೆ ಅಂಬಾವಿಲಾಸ ಅರಮನೆಯ ತಡೆ ಗೋಡೆ ಮತ್ತುಮಹಾರಾಣಿ ಕಾಲೇಜಿನ ಲ್ಯಾಬ್ ಕಟ್ಟಡ ಕುಸಿದು ಬಿದ್ದಿದೆ. ಕಳೆದ 10 ವರ್ಷಗಳ ಅವಧಿಯಲ್ಲಿ ಲ್ಯಾನ್ಸ್ ಡೌನ್ ಕಟ್ಟಡ, ದೇವರಾಜ ಮಾರುಕಟ್ಟೆ, ಸರಸ್ವತಿಪುರಂನಲ್ಲಿರುವ ಅಗ್ನಿಶಾಮಕ ಠಾಣೆ, ಮಾನಸ ಗಂಗೋತ್ರಿಯ ಜಯಲಕ್ಷ್ಮೀ ವಿಲಾಸ ಅರಮನೆ ಚಾವಣಿ, ವಾಣಿವಿಲಾಸ ಮಾರುಕಟ್ಟೆಯ ಗೋಡೆ ಸೇರಿದಂತೆ ಹತ್ತಾರು ಕಟ್ಟಡಗಳ ಗೋಡೆ ಕುಸಿತವಾಗಿವೆ. ಅಪಾಯದ ಅಂಚಿನಲ್ಲಿರುವ ಅಂಬಾವಿಲಾಸ ಅರಮನೆ, ದೊಡ್ಡಗಡಿಯಾರ, ಕೆ.ಆರ್.ಆಸ್ಪತ್ರೆ (ದೊಡ್ಡಾಸ್ಪತ್ರೆ), ಜಿಲ್ಲಾಧಿಕಾರಿಗಳ ಕಛೇರಿ, ಸಂಸ್ಕೃತ ಪಾಠಶಾಲೆ, ನಗರ ಪಾಲಿಕೆ ಕಟ್ಟಡ, ಸರಕಾರಿ ಅತಿಥಿ ಗೃಹ, ಮಹಾರಾಜ ಕಾಲೇಜು, ಮೈಸೂರು ಮೆಡಿಕಲ್ ಕಾಲೇಜು, ಕಾಡಾ ಕಟ್ಟಡ, ದೇವರಾಜ ಮಾರುಕಟ್ಟೆ ಹಳೆ ಕಾವಾ ಕಟ್ಟಡಗಳಾಗಿವೆ. ಮೈಸೂರಿನಲ್ಲಿ ಒಟ್ಟಾರೆ 234 ಪಾರಂಪರಿಕ ಕಟ್ಟಡಗಳಿವೆ. ಈ ಪೈಕಿ 131 ಕಟ್ಟಡಗಳನ್ನು ಸರ್ಕಾರ ಮಾನ್ಯ ಮಾಡಿದ್ದು, ಇದರಲ್ಲಿ 25 ಕಟ್ಟಡಗಳಿಗೆ ತುರ್ತಾಗಿ ದುರಸ್ತಿಯ ಅವಶ್ಯಕತೆ ಇದೆ ಎಂದು ಪಾರಂಪರಿಕ ತಜ್ಞರು ವರದಿ ನೀಡಿದ್ದಾರೆ. ಈ ಪಾರಂಪರಿಕ ಕಟ್ಟಡಗಳನ್ನು ಯಾರು ಹೇಗೆ ನಿರ್ವಹಿಸಬೇಕು ಎಂಬುದರ ಬಗ್ಗೆ ಸರಿಯಾದ ನೀತಿ – ನಿಯಮಾವಳಿಗಳೇ ಇಲ್ಲ. ಇವೆಲ್ಲದಕ್ಕಿಂತ ಪ್ರಮುಖವಾಗಿ ಮುಂಬಯಿ, ಅಹಮದಾಬಾದ್, ಹೈದರಾಬಾದ್‌ನಂಥ ನಗರಗಳಲ್ಲಿರುವ ಪಾರಂಪರಿಕ ಕಟ್ಟಡಗಳನ್ನು ಸಂರಕ್ಷಿಸುವ ಸಲುವಾಗಿಯೇ ಅಲ್ಲಿನ ಸರ್ಕಾರಗಳು ಒಂದು ಕಾಯಿದೆಯನ್ನೇ ರೂಪಿಸಿವೆ. ಕರ್ನಾಟಕಕ್ಕೂ ಇಂಥದ್ದೊಂದು ಕಾಯ್ದೆ, ನೀತಿ-ನಿಯಮ ಅಗತ್ಯವಿದೆ. ಸರ್ಕಾರ ಈ ಬಗ್ಗೆ ಗಂಭೀರ ಚಿಂತನೆ ನಡೆಸಿ ನಿಯಮ ಜಾರಿಗೆ ತರಬೇಕು. ಮೈಸೂರಿನಲ್ಲಿರುವ ಪಾರಂಪರಿಕ ಕಟ್ಟಡಗಳು ಸರಿಯಾದ ನಿರ್ವಹಣೆಯಿಲ್ಲದೆ ಶಿಥಿಲಾವಸ್ಥೆ ತಲುಪಿದ್ದು, ಅವುಗಳ ನಿರ್ವಹಣೆಗೆ ಸರ್ಕಾರ ಬಜೆಟ್‌ನಲ್ಲಿ ವಾರ್ಷಿಕವಾಗಿ ಕನಿಷ್ಠ ಪಕ್ಷ 1000 ಕೋಟಿ ರೂ.ಗಳನ್ನು ಕಾಯ್ದಿರಿಸಬೇಕು ಎಂದು ನಾನು ಸರ್ಕಾರಕ್ಕೆ ಒತ್ತಾಯ ಮಾಡುತ್ತೇನೆ.

*****

**ಉತ್ತರ:**

Karnataka Town and Country Planning Act, 1961 (ಕರ್ನಾಟಕ ನಗರ ಮತ್ತು ಗ್ರಾಮೀಣ ಪ್ರದೇಶ ಯೋಜನಾ ಕಾಯ್ದೆ 1961) ಅಡಿಯಲ್ಲಿ Zonal Regulation (Amendment) 2020 ನಿಯಮಗಳನ್ನು ಜಾರಿಗೆ ತಂದಿದ್ದು, ಇದರಲ್ಲಿ (ಬೆಂಗಳೂರು ಜಿಲ್ಲೆ ಹೊರತು ಪಡಿಸಿ) ಪ್ರತಿ ಜಿಲ್ಲೆಯಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ "ಪರಂಪರೆ ಸಂರಕ್ಷಣಾ ಸಮಿತಿಯನ್ನು"ಯನ್ನು ಹೊಂದಲು ಅವಕಾಶ ಕಲ್ಪಿಸಲಾಗಿರುತ್ತದೆ.

ಈ ಸಮಿತಿಯಲ್ಲಿ ಅಧಿಕಾರಿಗಳು, ತಜ್ಞರು, ವಾಸ್ತುಶಿಲ್ಪಿಗಳು ಮತ್ತು NGO ಪ್ರತಿನಿಧಿಗಳು ಸೇರಿ ಒಟ್ಟು 27 ಸದಸ್ಯರಿರುತ್ತಾರೆ. ಆ ಜಿಲ್ಲೆಯ ಸ್ಥಳೀಯ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರು ಸಮಿತಿಯ ಸದಸ್ಯ ಕಾರ್ಯದರ್ಶಿಗಳಾಗಿರುತ್ತಾರೆ.

Zonal Regulation (Amendment) 2020 ನಿಯಮಗಳಲ್ಲಿ ಒಟ್ಟು 15 ನಿಯಮಗಳನ್ನು ರೂಪಿಸಲಾಗಿರುತ್ತದೆ. ಸದರಿ ನಿಯಮಾವಳಿಗಳಲ್ಲಿ ಜಿಲ್ಲಾ ಸಮಿತಿಗೆ ಐತಿಹಾಸಿಕ, ಪುರಾತತ್ವ, ಕಲಾತ್ಮಕ, ಆಸ್ಥೆವುಳ್ಳಂತ ಯಾವುದೇ ರಚನೆ, ನಿರ್ಮಿತಿ ಹೊಂದಿರುವ ಸ್ಥಳಗಳು ಅಥವಾ ಕಟ್ಟಡಗಳನ್ನು ಪಾರಂಪರಿಕ ಪ್ರದೇಶ ಅಥವಾ ಕಟ್ಟಡಗಳೆಂದು ಪಟ್ಟಿ ಮಾಡಲು, ಸಂರಕ್ಷಿಸಲು ಅಭಿವೃದ್ಧಿಗೊಳಿಸಲು ಸೂಕ್ತ ನಿಯಮ ರೂಪಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.

Karnataka Town and Country Planning Act, 1961 (ಕರ್ನಾಟಕ ನಗರ ಮತ್ತು ಗ್ರಾಮೀಣ ಪ್ರದೇಶ ಯೋಜನಾ ಕಾಯ್ದೆ 1961) ಅಡಿಯಲ್ಲಿ Zonal Regulation(Amendment) 2020 ನಿಯಮಗಳನ್ನು ಈಗಾಗಲೇ ಜಾರಿಗೆ ತಂದಿರುವುದರಿಂದ, ಪ್ರತ್ಯೇಕ ಕಾಯ್ದೆಯ ಅವಶ್ಯಕತೆ ಇರುವುದಿಲ್ಲ.

ಮೈಸೂರು ನಗರದಲ್ಲಿ ಘೋಷಿಸಿರುವ 131 ಪಾರಂಪರಿಕ ಕಟ್ಟಡಗಳ ಸ್ಥಿತಿಗತಿಗಳ ಬಗ್ಗೆ ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ತಜ್ಞರ ಸಮಿತಿಯಿಂದ ಭೌತಿಕ ಪರಿಶೀಲನೆ ನಡೆಸಲಾಗುತ್ತಿದ್ದು, ಸದರಿ ವರದಿ ಬಂದ ನಂತರ ದುರಸ್ಥಿ ಮತ್ತು ಸಂರಕ್ಷಣಾ ಕಾಮಗಾರಿಗಳಿಗೆ ಸೂಕ್ತ ಅನುದಾನ ಒದಗಿಸುವ ಬಗ್ಗೆ ಪರಿಶೀಲಿಸಲಾಗುವುದು.

**ಸಂಖ್ಯೆ: TOR 362 TDV 2022**

**(ಆನಂದ್ ಸಿಂಗ್)**
ಪ್ರವಾಸೋದ್ಯಮ ಹಾಗೂ
ಪರಿಸರ ಮತ್ತು ಜೀವಿ ಶಾಸ್ತ್ರ ಸಚಿವರು